**<u>ಕರ್ನಾಟಕ ಸರ್ಕಾರ</u>**
**(ಕೃಷಿ ಇಲಾಖೆ)**

ಸಂಖ್ಯೆ:ಕೃಇಸಿ-1/ಸಕೃಅ-2/ನೇನೇ/28/2011-12

ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು-1,
ದಿನಾಂಕ:19.09.2011

**<u>ಅಧಿಸೂಚನೆ</u>**

**1.** ಕೃಷಿ ಇಲಾಖೆಯಲ್ಲಿ ಕೆಳಕಂಡ "ಬಿ" ಗುಂಪಿನ ಹುದ್ದೆಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/ 32/ಎಸ್ಆರ್ಇ/98, ದಿನಾಂಕ:01.01.2000ರ ಕರ್ನಾಟಕ ಕೃಷಿ ಸೇವೆಗಳು (ನೇಮಕಾತಿ) ನಿಯಮಗಳು 1999ರ ಅನ್ವಯ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ONLINE ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರ. ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ | ಹುದ್ದೆಯ ಸಂಕೇತ | ಹುದ್ದೆಗಳ ಸಂಖ್ಯೆ |
|---|---|---|---|---|
| 1. | ಕೃಷಿ ಅಧಿಕಾರಿ | ರೂ.11400-21600 | 01 | 100 |
| 2. | ಸಹಾಯಕ ಕೃಷಿ ಅಧಿಕಾರಿ | ರೂ.10800-20025 | 02 | 265 |
| 3. | ಸಹಾಯಕ ಕೃಷಿ ಅಧಿಕಾರಿ (ಕೃಷಿ ಇಂಜಿನಿಯರಿಂಗ್ ಮತ್ತು ನೀರು ನಿರ್ವಹಣೆ) | ರೂ.10800-20025 | 03 | 015 |

**ಟಿಪ್ಪಣಿ: ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.**

**<u>ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಭರ್ತಿ ಮಾಡಿ ಶುಲ್ಕವನ್ನು ಪಾವತಿಸತಕ್ಕದ್ದು.</u>**

**<u>ಅರ್ಜಿಗಳನ್ನು ಆನ್-ಲೈನ್ (On-line)(ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.</u>**

**2. <u>ನಿಗದಿತ ಶುಲ್ಕ:</u>**

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.500/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ.200/- |

**ಅ)** ಅಭ್ಯರ್ಥಿಗಳು ನಿಗದಿತ ಶುಲ್ಕವನ್ನು ಕರ್ನಾಟಕದ ಯಾವುದೇ ರಾಷ್ಟ್ರೀಯ ಬ್ಯಾಂಕಿನಿಂದ **<u>"ಕೃಷಿ ನಿರ್ದೇಶಕರು, ಬೆಂಗಳೂರು-1",</u>** ಇವರ ಹೆಸರಿಗೆ ಬೆಂಗಳೂರಿನಲ್ಲಿ ಪಾವತಿಯಾಗುವಂತೆ **<u>"ಡಿಮ್ಯಾಂಡ್ ಡ್ರಾಫ್ಟ್"</u>** ರೂಪದಲ್ಲಿ ಪಡೆಯಬೇಕು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇಲಾಖೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಇದನ್ನು ಹೊರತುಪಡಿಸಿ ಇತರೆ ಯಾವುದೇ ರೂಪದಲ್ಲಿ ಶುಲ್ಕವನ್ನು ಸ್ವೀಕರಿಸಲಾಗುವುದಿಲ್ಲ.

**ಆ)** ಅಭ್ಯರ್ಥಿಗಳು **<u>"ಡಿಮ್ಯಾಂಡ್ ಡ್ರಾಫ್ಟ್"ನ</u>** ಹಿಂಭಾಗದಲ್ಲಿ ಅವರ ಹೆಸರು, ಅರ್ಜಿ ಸಂಖ್ಯೆ, ಅರ್ಜಿಯನ್ನು ಸಲ್ಲಿಸಿರುವ ಹುದ್ದೆಯ ಹೆಸರು ಮತ್ತು ವಿಳಾಸವನ್ನು ತಪ್ಪದೇ ನಮೂದಿಸಬೇಕು. ಹಾಗೂ **<u>"ಡಿಮ್ಯಾಂಡ್ ಡ್ರಾಫ್ಟ್"ನ</u>** ಸಂಖ್ಯೆ, ದಿನಾಂಕ ಮತ್ತು ಬ್ಯಾಂಕಿನ ಹೆಸರನ್ನು ಅಭ್ಯರ್ಥಿಗಳು ಅಂತರ್ಜಾಲದ ಮೂಲಕ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ನಿರ್ದಿಷ್ಟ ಪಡಿಸಿದ ಜಾಗದಲ್ಲಿ ನಮೂದಿಸತಕ್ಕದ್ದು. ಹಾಗೂ

**"ಡಿಮ್ಯಾಂಡ್ ಡ್ರಾಫ್ಟ್"ನ** ಒಂದು ಜೆರಾಕ್ಸ್ ಪ್ರತಿಯನ್ನು ತೆಗೆದುಕೊಂಡು ಅಭ್ಯರ್ಥಿಯು ಅವರ ಮಾಹಿತಿಗೆ ಇಟ್ಟುಕೊಂಡು, ಅದನ್ನು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಇ) ಅಂತರ್ಜಾಲದ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ಅಭ್ಯರ್ಥಿಗಳು ಅರ್ಜಿಯ ಎರಡು ಪ್ರತಿಗಳನ್ನು ಪ್ರಿಂಟ್ ಪಡೆದುಕೊಂಡು ಒಂದು ಪ್ರತಿಯನ್ನು ಅವರ ಮಾಹಿತಿಗೆ ಇಟ್ಟುಕೊಂಡು ಅದನ್ನು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

**ಈ) ಅರ್ಜಿಯ ಮತ್ತೊಂದು ಪ್ರತಿಯನ್ನು "ಡಿಮ್ಯಾಂಡ್ ಡ್ರಾಫ್ಟ್"ನ ಮೂಲ ಪ್ರತಿಯೊಂದಿಗೆ (Original Demand Draft)ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಶೈಕ್ಷಣಿಕ ವಿದ್ಯಾರ್ಹತೆ ಪ್ರಮಾಣ ಪತ್ರಗಳು, ಕೋರಿರುವ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳು, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಇತರೆ ಮುಂತಾದ ಅಗತ್ಯ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕೃತಗೊಂಡ ಜೆರಾಕ್ಸ್ ಪ್ರತಿಯೊಂದಿಗೆ " 14" X 10" " ಅಳತೆಯ ಲಕೋಟೆಯಲ್ಲಿ, ಲಕೋಟೆಯ ಮೇಲೆ ಅಭ್ಯರ್ಥಿಯ ಹೆಸರು, ಅರ್ಜಿಯ ಸಂಖ್ಯೆಯನ್ನು ಮತ್ತು "Application for the post of Agricultural Officer / Assistant Agricultural Officer / Assistant Agricultural Officer (Agriculture Engineering & Water Management)" (ಅನ್ವಯಿಸುವ ಹುದ್ದೆಯ ಹೆಸರನ್ನು ಮಾತ್ರ ನಮೂದಿಸತಕ್ಕದ್ದು) ತಪ್ಪದೇ ಬರೆದು "ಕೃಷಿ ಆಯುಕ್ತರು, ಶೇಷಾದ್ರಿ ರಸ್ತೆ, ಬೆಂಗಳೂರು–560001," ಈ ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆ ಮೂಲಕ ದಿನಾಂಕ:11.11.2011 ರೊಳಗೆ ತಲುಪುವಂತೆ ಸಲ್ಲಿಸತಕ್ಕದ್ದು.**

**3. ಆನ್–ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:**

**ಅ) ಅಭ್ಯರ್ಥಿಗಳು ಆನ್–ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಪ್ರಾರಂಭಿಸುವ ಮೊದಲು "Notification" ಮತ್ತು "Instructions" ಗಳನ್ನು ಕಡ್ಡಾಯವಾಗಿ ಓದಿಕೊಳ್ಳುವುದು. ಹಾಗೂ ಈ ಮೇಲೆ ಪ್ಯಾರಾ–2ರಲ್ಲಿ ತಿಳಿಸಿರುವಂತೆ ಅವರುಗಳ ಮೀಸಲಾತಿಗೆ ನಿಗದಿಪಡಿಸಿರುವ ಮೊತ್ತಕ್ಕೆ "ಡಿಮ್ಯಾಂಡ್ ಡ್ರಾಫ್ಟ್" ಪಡೆದಿಟ್ಟುಕೊಂಡಿರತಕ್ಕದ್ದು.**

ಆ)ಅಭ್ಯರ್ಥಿಗಳು ಇಲಾಖೆಯ ಅಧಿಕೃತ ವೆಬ್‌ಸೈಟ್ "http://raitamitra.kar.nic.in" ನಲ್ಲಿ ಟೆಂಡರ್/ಪ್ರಕಟಣೆಗಳು ಅಡಿಯಲ್ಲಿ ಕೃಅ, ಸಕೃಅ ನೇಮಕಾತಿಗೆ ಅರ್ಜಿ ಅಥವಾ Explorer Address (URL)ನಲ್ಲಿ "http://raitamitra.kar.nic.in/recruit.html"ನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ "ON-LINE APPLICATION FOR THE RECRUITMENT OF AGRICULTURAL OFFICER, ASSISTANT AGRICULTURAL OFFICER & ASSISTANT AGRICULTURAL OFFICER (AGRICULTURE ENGINEERING & WATER MANAGEMENT)" ಎಂದು ಮೂಡುವುದು. ಅದರ ಮೇಲೆ ಕ್ಲಿಕ್ ಮಾಡಿದ ಕೂಡಲೇ ಅಲ್ಲಿ ON-LINE APPLICATION ಪರದೆ ತೆರೆದುಕೊಳ್ಳುತ್ತದೆ. ಇಲ್ಲಿ ಭಾವಚಿತ್ರ ಮತ್ತು ಎಲ್ಲಾ ಅಗತ್ಯ ದಾಖಲಾತಿಗಳನ್ನು ಸ್ಕ್ಯಾನ್ (Scan) ಮಾಡುವ ಬಗ್ಗೆ ನೀಡಿರುವ ಸೂಚನೆಗಳನ್ನು ಸಹ ಓದಿಕೊಂಡು ಅದರಂತೆ ಕ್ರಮವಹಿಸುವುದು.

**ಇ)ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅನುಸರಿಸಬೇಕಾದ ಕ್ರಮಗಳು:**

- ಅಭ್ಯರ್ಥಿಗಳು ಅವರ ವಿದ್ಯಾರ್ಹತೆಗೆ ಅನ್ವಯವಾಗುವ ಹುದ್ದೆಯ ಎದುರು ಕ್ಲಿಕ್ ಮಾಡಿದ ಕೂಡಲೇ ಅರ್ಜಿ ನಮೂನೆ ತೆರೆದುಕೊಳ್ಳುತ್ತದೆ.
- ಇಲ್ಲಿ ಅಭ್ಯರ್ಥಿಗಳು ಮೊದಲು **"ಡಿಮ್ಯಾಂಡ್ ಡ್ರಾಫ್ಟ್"** ಸಂಖ್ಯೆ, ದಿನಾಂಕ, ಮೊತ್ತ, ಬ್ಯಾಂಕಿನ ಹೆಸರು ಮತ್ತು ಶಾಖೆಯ ಹೆಸರುಗಳನ್ನು ಕಡ್ಡಾಯವಾಗಿ ನಮೂದಿಸುವುದು. ನಂತರ ಈ ಮಾಹಿತಿಯನ್ನು ದೃಢಪಡಿಸಿಕೊಳ್ಳಲು **"ಡಿಮ್ಯಾಂಡ್ ಡ್ರಾಫ್ಟ್"** ಸಂಖ್ಯೆಯನ್ನು ಮಾತ್ರ ಮತ್ತೊಮ್ಮೆ ನಮೂದಿಸುವುದು (re-enter). ಒಂದು **"ಡಿಮ್ಯಾಂಡ್ ಡ್ರಾಫ್ಟ್"** ಸಂಖ್ಯೆಯನ್ನು ಒಂದು ಬಾರಿಗೆ ಮಾತ್ರ ನಮೂದಿಸಲು ಮಾತ್ರ ಅವಕಾಶವಿರುತ್ತದೆ. ಆದ್ದರಿಂದ, ಅಭ್ಯರ್ಥಿಗಳು **"ಡಿಮ್ಯಾಂಡ್ ಡ್ರಾಫ್ಟ್"**ಗೆ ಸಂಬಂಧಿಸಿದ ಮಾಹಿತಿಗಳನ್ನು ಎಚ್ಚರಿಕೆಯಿಂದ ನಮೂದಿಸುವುದು. **"ಡಿಮ್ಯಾಂಡ್ ಡ್ರಾಫ್ಟ್"**ಗೆ ಸಂಬಂಧಿಸಿದ ಮಾಹಿತಿಗಳನ್ನು ನಮೂದಿಸಿದ ನಂತರ ಮುಂದಿನ ಪರದೆ ತೆರೆದುಕೊಳ್ಳುವುದು.
- ಇಲ್ಲಿ ಅಭ್ಯರ್ಥಿಗಳು ತಮಗೆ ಸಂಬಂಧಿಸಿದ **ಎಲ್ಲಾ ಮಾಹಿತಿಯನ್ನು ತಪ್ಪಿಲ್ಲದಂತೆ ಎಚ್ಚರಿಕೆಯಿಂದ ಭರ್ತಿ ಮಾಡುವುದು.**
- ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಯ ಭಾವಚಿತ್ರ ಮತ್ತು ಎಲ್ಲಾ ಶೈಕ್ಷಣಿಕ ಪ್ರಮಾಣ ಪತ್ರಗಳು, ಕೋರಿರುವ ಮೀಸಲಾತಿ ಪ್ರಮಾಣಪತ್ರಗಳು, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಇತರೆ ಪ್ರಮಾಣ ಪತ್ರಗಳ ಸ್ಕ್ಯಾನ್ (Scan) ಪ್ರತಿಗಳನ್ನು UPLOAD ಮಾಡಬೇಕು.
- ನಂತರ ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡಿದ ನಂತರ review ಮೇಲೆ ಕ್ಲಿಕ್ ಮಾಡಿದ ಕೂಡಲೇ ಅರ್ಜಿಯಲ್ಲಿ ಭರ್ತಿ ಮಾಡಿದ ಎಲ್ಲಾ ವಿವರಗಳು ಪರದೆಯ ಮೇಲೆ ಮೂಡುತ್ತದೆ. ಅಭ್ಯರ್ಥಿಗಳ ವಿವರಗಳು ಪರದೆಯ ಮೇಲೆ ಮೂಡಿದ ಕೂಡಲೇ ಎಲ್ಲಾ ವಿವರಗಳನ್ನು ಮತ್ತೊಮ್ಮೆ ಪರಿಶೀಲಿಸಿ, ಏನಾದರೂ ತಪ್ಪುಗಳಾಗಿದ್ದಲ್ಲಿ ಅದನ್ನು ಸರಿಪಡಿಸಲು edit ಮೇಲೆ ಕ್ಲಿಕ್ ಮಾಡಿ ನಂತರ ಅಗತ್ಯ ತಿದ್ದುಪಡಿಗಳನ್ನು ಮಾಡಬಹುದು. ಅನಂತರ ಅರ್ಜಿಯಲ್ಲಿ ಭರ್ತಿ ಮಾಡಿರುವ ಎಲ್ಲಾ ವಿವರಗಳು ಸರಿಯಾಗಿದೆಯೆಂದು ಮನದಟ್ಟು ಮಾಡಿಕೊಂಡು submit ಕ್ಲಿಕ್ ಮಾಡುವುದು.
- ಅಭ್ಯರ್ಥಿಯು ಅರ್ಜಿ ಭರ್ತಿ ಮಾಡಿದ ನಂತರ print application ಮೇಲೆ ಕ್ಲಿಕ್ ಮಾಡಿ ಅರ್ಜಿಯ ಪ್ರತಿಯನ್ನು **ತಪ್ಪದೇ ಅದೇ ಸಮಯದಲ್ಲಿ ದ್ವಿಪ್ರತಿಗಳಲ್ಲಿ ಮುದ್ರಿಸಿಕೊಳ್ಳುವುದು.**

• ಅಭ್ಯರ್ಥಿಯು reprint application ಕ್ಲಿಕ್ ಮಾಡಿ ಅರ್ಜಿ ಸಂಖ್ಯೆ ಮತ್ತು ಹುಟ್ಟಿದ ದಿನಾಂಕವನ್ನು ನಮೂದಿಸಿ ಆನ್ ಲೈನ್ ಅರ್ಜಿಯ ಪ್ರತಿಯನ್ನು ಮುದ್ರಿಸಿಕೊಳ್ಳಬಹುದು. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಮತ್ತು ಸಮಯದ ನಂತರ ಅರ್ಜಿಯನ್ನು ಮುದ್ರಿಸಿಕೊಳ್ಳಲು ಅವಕಾಶವಿರುವುದಿಲ್ಲ.

**• ಅಭ್ಯರ್ಥಿಯು ಆನ್ ಲೈನ್‌ನಲ್ಲಿ ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸಿರುತ್ತಾರೋ ಆ ಹುದ್ದೆಗೆ ಮಾತ್ರ ಅವರ ಶುಲ್ಕವನ್ನು ಮತ್ತು ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದು. ಇತರೆ ಯಾವುದೇ ಹುದ್ದೆಗೆ ಪರಿಗಣಿಸಲಾಗುವುದಿಲ್ಲ.**

- **ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 28–09–2011 ಬೆಳಗ್ಗೆ 10.00 ಗಂಟೆ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31–10–2011 ಸಂಜೆ 5.30 ಗಂಟೆ.**
- **ಅಂತರ್ಜಾಲದ ಅರ್ಜಿಯ ಪ್ರತಿಯನ್ನು ನಿಗದಿತ ಶುಲ್ಕವನ್ನು ಪಾವತಿಸಿದ "ಡಿಮ್ಯಾಂಡ್ ಡ್ರಾಫ್ಟ್" ನ ಮೂಲ ಪ್ರತಿ ಮತ್ತು ಇತರೆ ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ:11–11–2011 ಸಂಜೆ 5.30 ಗಂಟೆ.**

**4. ಅರ್ಹತಾ ಷರತ್ತುಗಳು:–**

ಅ)ಭಾರತೀಯ ನಾಗರೀಕನಾಗಿರತಕ್ಕದ್ದು.

ಆ)ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ)ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**5. ನೇಮಕಾತಿ ವಿಧಾನ:–**

ಕರ್ನಾಟಕ ಕೃಷಿ ಸೇವೆಗಳು (ನೇಮಕಾತಿ) ನಿಯಮಗಳು 1999ರನ್ವಯ ಅಭ್ಯರ್ಥಿಗಳು ಈ ಅಧಿಸೂಚನೆಯ ಪ್ಯಾರಾ–6ರಲ್ಲಿ ತಿಳಿಸಿರುವಂತೆ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಪಡೆದ ಒಟ್ಟು ಶೇಕಡವಾರು ಅಂಕಗಳ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳ ಮೀಸಲಾತಿಗೆ (ಮೀಸಲಾತಿ ವರ್ಗೀಕರಣಗಳಂತೆ) ಸಂಬಂಧಿಸಿದಂತೆ ಸಿಂಧುತ್ವ ಪ್ರಮಾಣ ಪತ್ರವನ್ನು ಹಾಗೂ ಪೋಲೀಸ್ ವರದಿ, ದೇಹದಾರ್ಢ್ಯ ವೈದ್ಯಕೀಯ ಪ್ರಮಾಣಪತ್ರ ಇವುಗಳನ್ನು ಸಂಬಂಧಿಸಿದ ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು ಆಯ್ಕೆ ಬಗ್ಗೆ ಸಮರ್ಥನೆಯಾದ ಪ್ರಕರಣಗಳಿಗೆ ಮಾತ್ರ ನೇಮಕಾತಿ ಆದೇಶ ನೀಡಲಾಗುವುದು.

**6. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:**

**6.1 ಶೈಕ್ಷಣಿಕ ವಿದ್ಯಾರ್ಹತೆ:** ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಯ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರು ಸಹ ಪರಿಗಣಿಸಲಾಗುವುದಿಲ್ಲ.

**6.2 ವಯೋಮಿತಿ:** ಅನುಸೂಚಿಯಲ್ಲಿ ಆಯಾ ಹುದ್ದೆಯ ಮುಂದೆ ಸೂಚಿಸಿದಂತೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. (ಈ ಉಪ ಕಂಡಿಕೆಗೆ ಸಂಬಂಧಿಸಿದ ವಿವರಣೆಗಳಿಗೆ ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮಗಳು 2 ಮತ್ತು 9 ರನ್ವಯ ಅರ್ಥೈಸಿಕೊಳ್ಳುವುದು)

ಇ) ಅಭ್ಯರ್ಥಿಗಳು ನ್ಯಾಷನಲ್ ಕ್ಯಾಡೆಟ್ ಕೋರ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂಥ ಕ್ಯಾಡೆಟ್ ಪರಿವೀಕ್ಷಕನಾಗಿ ಅವನು ಸೇವೆ ಸಲ್ಲಿಸಿದಷ್ಟು ವರ್ಷಗಳು.

ಈ) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಿಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅವನು / ಅವಳು ಅಂತಹ ಗ್ರಾಮ ಪರಿಶೀಲಿಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

ಉ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

ಊ)ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಋ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

ೠ) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 6.2 (ೠ)ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡಿರಬೇಕು.

**7. <u>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:–</u>**

**ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು:–**

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ "ಡಿ" ರಲ್ಲಿ

ಆ) ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ "ಇ" ರಲ್ಲಿ

ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ನಮೂನೆ "ಎಫ್" ರಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರಬೇಕು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.) (ಮೀಸಲಾತಿ ಪ್ರಮಾಣಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು.)

**8. <u>ಗ್ರಾಮೀಣ ಅಭ್ಯರ್ಥಿ:–</u>**

ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/08/ಸೆನೆನಿ/2001 ದಿ:13.02.2001ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ

ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿ (Block Education Officer) ರವರಿಂದ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ)(ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ) (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ)

**9. ಕನ್ನಡ ಮಾಧ್ಯಮ ಅಭ್ಯರ್ಥಿ:–**

ಸರ್ಕಾರಿ ಅಧಿಸೂಚನೆ ಸಂಖ್ಯೆ:ಸಿಆಸುಇ/71/ಸೆನೆನಿ/2001 ದಿ:24.10.2002ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ)

**10. ಅಂಗವಿಕಲ ಅಭ್ಯರ್ಥಿ:–**

ಸಮೂಹ "ಬಿ" ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/50/ಎಸ್‌ಆರ್‌ಆರ್/2000 ದಿ:03.09.2005ರನ್ವಯ ಮತ್ತು ಸರ್ಕಾದ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/52/ಸೆನೆನಿ/2009 ದಿ:28.09.2010ರಲ್ಲಿ ಗುರ್ತಿಸಿರುವಂತೆ) ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ/115/ಸೆನೆನಿ/2005 ದಿ:19.11.2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸ ಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ. (ಈ ಪ್ರಮಾಣ ಪತ್ರದ ನಮೂನೆಯನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ)

**11. <u>ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ:</u>**

ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/23/ಎಸ್‌ಆರ್‌ಆರ್/99 ದಿನಾಂಕ:23.11.2000ರ ಪ್ರಕಾರ ಯೋಜನೆಗಳಿಂದ ಸಂತ್ರಸ್ತರಾದ ಅಭ್ಯರ್ಥಿಗಳಿಗೆ ಮೀಸಲಾತಿ ಸೌಲಭ್ಯ ಇರುವುದಿಲ್ಲ.

**12. <u>ಇಲಾಖೆಯೊಡನೆ ಪತ್ರ ವ್ಯವಹಾರ:–</u>**

ಇಲಾಖೆಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳಿಗೆ ಕರೆ ಪತ್ರ ಬಾರದಿದ್ದಲ್ಲಿ ಅಂತಹವರು ಕೃಷಿ ಆಯುಕ್ತರು, ಬೆಂಗಳೂರು ರವರ ಕಛೇರಿಯನ್ನು ಖುದ್ದಾಗಿ ಸಂಪರ್ಕಿಸತಕ್ಕದ್ದು.

ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಕೃಷಿ ಆಯುಕ್ತರು, ಬೆಂಗಳೂರು, ರವರ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಇಲಾಖೆಯು ಪ್ರಯತ್ನಿಸುವುದು. ಆದಾಗ್ಯೂ ಇಲಾಖೆಯು ಈ ವಿಚಾರದಲ್ಲಿ ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಇಲಾಖೆಯೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು:–

1) ಹುದ್ದೆಯ ಹೆಸರು
2) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)
3) ಅರ್ಜಿ ಸಂಖ್ಯೆ
4) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

**13. <u>ಪ್ರಾಮುಖ್ಯವಾದ ಸೂಚನೆಗಳು:</u>**

**<u>ಅ)ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್ / ಮಾರ್ಕರ್ ಪೆನ್‌ರಲ್ಲಿ ಸಹಿಯನ್ನು ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಶೈಕ್ಷಣಿಕ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಕೋರಿರುವ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳು, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಇತರೆ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು.</u>**

**<u>ಆ)ಅರ್ಜಿಯ ಒಂದು ಪ್ರತಿಯನ್ನು ಅಭ್ಯರ್ಥಿಗಳು ತಮ್ಮ ಸಹಿಯೊಂದಿಗೆ, "ಡಿಮ್ಯಾಂಡ್ ಡ್ರಾಫ್ಟ್"ನ ಮೂಲ ಪ್ರತಿ ಮತ್ತು UPLOAD ಮಾಡಿರುವ ಎಲ್ಲಾ ಶೈಕ್ಷಣಿಕ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಕೋರಿರುವ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳು, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಇತರೆ ಮುಂತಾದ ಅಗತ್ಯ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕೃತಗೊಂಡ ಜೆರಾಕ್ಸ್ ಪ್ರತಿಯೊಂದಿಗೆ ಪ್ಯಾರಾ–2(ಈ)ರಲ್ಲಿ ವಿವರಿಸಿರುವಂತೆ ನಿಗದಿತ ದಿನಾಂಕದೊಳಗೆ ಸಲ್ಲಿಸತಕ್ಕದ್ದು.</u>**

**<u>ಇ)ಎಲ್ಲಾ ಶೈಕ್ಷಣಿಕ ಪ್ರಮಾಣ ಪತ್ರಗಳು, ಕೋರಿರುವ ಮೀಸಲಾತಿ ಪ್ರಮಾಣಪತ್ರಗಳು, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಇತರೆ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ಅದೇ ಶೈಕ್ಷಣಿಕ ವಿದ್ಯಾರ್ಹತೆ ಪ್ರಮಾಣ ಪತ್ರ, ಮೀಸಲಾತಿ ಪ್ರಮಾಣ ಪತ್ರ, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಇತರೆ ದಾಖಲಾತಿಗಳ ಮೂಲ ಪ್ರತಿಯನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗುವ ಸಮಯದಲ್ಲಿ ಹಾಜರುಪಡಿಸಬೇಕು. ತಪ್ಪಿದಲ್ಲಿ ಇವರ ಮೀಸಲಾತಿಯನ್ನು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.</u>**

**ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

1. ಹುದ್ದೆಗೆ ನಿಗದಿಪಡಿಸಿದ ಶುಲ್ಕ ಪಾವತಿ ಡಿಮ್ಯಾಂಡ್ ಡ್ರಾಫ್ಟ್ ಮೂಲ ಪ್ರತಿ.
2. ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳು.
3. ಅಂಕಪಟ್ಟಿಯಲ್ಲಿ ಶೇಕಡಾವಾರು ಅಂಕವನ್ನು ನಮೂದಿಸದೇ ಇದ್ದಲ್ಲಿ ಗ್ರೇಡನ್ನು ಶೇಕಡಾವಾರು ಅಂಕಗಳಿಗೆ ಪರಿವರ್ತಿಸಿದ ಪ್ರಮಾಣಪತ್ರ.
4. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ / ವರ್ಗಾವಣೆ ಪ್ರಮಾಣಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
5. ಕೃಷಿ ವಿಶ್ವವಿದ್ಯಾನಿಲಯ ಅಥವಾ ಕೃಷಿ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದರೆ, ಸೇವಾ ಪ್ರಮಾಣ ಪತ್ರ. (ಸೇವಾ ಅನುಭವದ ಮೇಲೆ ಕೃಪಾಂಕ ಕೋರಿದ್ದಲ್ಲಿ) **(ಕೃಷಿ ಅಧಿಕಾರಿ ಹುದ್ದೆಗೆ ಮಾತ್ರ ಅನ್ವಯಿಸುತ್ತದೆ) (ತಾತ್ಕಾಲಿಕ ಸೇವೆ ಅಥವಾ ಗುತ್ತಿಗೆ ಆಧಾರದ ಸೇವೆಯನ್ನು ಪರಿಗಣಿಸಲಾಗುವುದಿಲ್ಲ)**
6. ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ. (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
7. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗೆ ಆ ಬಗ್ಗೆ ಸಂಬಂಧಪಟ್ಟ ಇಲಾಖೆಯವರು ನೀಡಿರುವ ವೈದ್ಯಕೀಯ ಮಂಡಳಿ ವರದಿ ಮತ್ತು ಅಭ್ಯರ್ಥಿಯು ಆ ವ್ಯಕ್ತಿಯ ಕುಟುಂಬದವರಾಗಿ ಮಾಜಿ ಸೈನಿಕ ಮೀಸಲಾತಿಯಡಿ ಉದ್ಯೋಗಕ್ಕೆ ಅರ್ಹರಿರುವ ಬಗ್ಗೆ ಸಂಬಂಧಪಟ್ಟ ಜಿಲ್ಲೆಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಪಡೆದಿರುವ ಪ್ರಮಾಣಪತ್ರ. (ಮಾಜಿ ಸೈನಿಕ ಕೋಟಾದಡಿಯಲ್ಲಿ ಮಾಜಿ ಸೈನಿಕರ ಕುಟುಂಬದವರಾಗಿ ಮೀಸಲಾತಿ ಕೋರುವವರು)
8. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ. (ಮೀಸಲಾತಿ ಕೋರಿದ್ದಲ್ಲಿ.)
9. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
10. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣಪತ್ರ. (ಮೀಸಲಾತಿ ಕೋರಿದ್ದಲ್ಲಿ)
11. ಅಂಗವಿಕಲ ಮೀಸಲಾತಿ ಪ್ರಮಾಣಪತ್ರ. (ಮೀಸಲಾತಿ ಕೋರಿದ್ದಲ್ಲಿ)
12. ವಯೋಮಿತಿ ಸಡಿಲಿಕೆಗೆ ಸಂಬಂಧಿಸಿದ ದಾಖಲಾತಿ. (ಸಡಿಲಿಕೆ ಕ್ಲೇಮ್ ಮಾಡಿದ್ದಲ್ಲಿ)

(ಮೇಲಿನ ಕ್ರಮ ಸಂಖ್ಯೆ: 8, 9, 10 ಮತ್ತು 11ರ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ. ನಿಗದಿಪಡಿಸಿದ ನಮೂನೆಗಳಲ್ಲಿ ಮೀಸಲಾತಿಯನ್ನು ಕೋರದೇ ಇತರೆ ನಮೂನೆಗಳಲ್ಲಿ ಕೋರಿದ್ದಲ್ಲಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು.)

**14. <u>ವಿಶೇಷ ಸೂಚನೆಗಳು:</u>**

1. ONLINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಎರಡು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಪ್ರತಿಯನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.
2. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.
3. ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

**15. <u>ದುರ್ನಡತೆ:</u>** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಮೂಲ ದಾಖಲಾತಿಗಳ ಪರಿಶೀಲನೆ ಹಾಗೂ ಇತ್ಯಾದಿ ಸಂದರ್ಭದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು / ಅವಳು ಸ್ವಂತ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/–
ಕೃಷಿ ಆಯುಕ್ತರು

## ಅನುಸೂಚಿ

ಅಧಿಸೂಚನೆ ಸಂಖ್ಯೆ: ಕೃಇಸಿ–1/ಸಕೃಅ–2/ನೇನೇ/28/2011–12 ದಿನಾಂಕ:19.09.2011

**ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:31.10.2011 ಸಂಜೆ 5.30 ಗಂಟೆ**

| ಹುದ್ದೆಗಳ ಅನು ಕ್ರಮ ಸಂಖ್ಯೆ | ಹುದ್ದೆಯ ಸಂಕೇತ / POST CODE | ಹುದ್ದೆಯ ಪದನಾಮ ಮತ್ತು ಸಂಖ್ಯೆ | ವೇತನ ಶ್ರೇಣಿ | ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | ವಯೋಮಿತಿ (ವಯಸ್ಸು ವರ್ಷಗಳಲ್ಲಿ) | ಹುದ್ದೆಗಳ ವರ್ಗೀಕರಣ |
|---|---|---|---|---|---|---|
| 1 | 2 | 3 | 4 | 5 | 6 | 7 |
| 461–560 | 01 | ಕೃಷಿ ಅಧಿಕಾರಿ – 100 | ರೂ.11400–21600 | * | ಕನಿಷ್ಠ – 18<br>ಗರಿಷ್ಠ – 35<br><br>ಪ್ರ–2ಎ, ಪ್ರ–2ಬಿ, ಪ್ರ–3ಎ, ಪ್ರ–3ಬಿ } 38<br><br>ಪ.ಜಾ, ಪ.ಪಂ, ಪ್ರ–1 } 40 | (see below) |

| ಮೀಸಲಾತಿ | ಇ | ಮ | ಗ್ರಾ | ಮಾ.ಸೈ | ಕ.ಮಾ.ಅ | ಅಂ.ವಿ | ಒಟ್ಟು |
|---|---|---|---|---|---|---|---|
| ಪ.ಜಾ | **05** | **05** | **03** | **01** | **01** | **00** | **15** |
| ಪ.ಪಂ | **01** | **01** | **01** | **00** | **00** | **00** | **03** |
| ಪ್ರ–1 | **01** | **01** | **01** | **01** | **00** | **00** | **04** |
| ಪ್ರ–2ಎ | **04** | **04** | **04** | **02** | **01** | **00** | **15** |
| ಪ್ರ–2ಬಿ | **01** | **01** | **00** | **01** | **00** | **01** | **04** |
| ಪ್ರ–3ಎ | **01** | **01** | **00** | **01** | **00** | **01** | **04** |
| ಪ್ರ–3ಬಿ | **02** | **01** | **02** | **00** | **00** | **00** | **05** |
| ಸಾ.ಅ | **14** | **15** | **12** | **05** | **03** | **01** | **50** |
| ಒಟ್ಟು | **29** | **29** | **23** | **11** | **05** | **03** | **100** |

* I. 1.Must be holder of B.Sc., (Agriculture) Degree awarded by a University established by Law in India.
2.Must be holder of Masters Degree in Agricultural Sciences.
3.The selection shall be based on the marks secured in the highest of the qualifications prescribed, that is, Master's Degree.

II. 1.A Weightage of one mark for each completed year of service subject to a maximum of ten marks in case of such of the candidates who have served in the University of Agricultural Sciences, Department of Agriculture.
2.If marks secured by two or more candidates are found to be equal, candidates who are older in age shall be treated as senior to persons who are younger, the number of candidates so selected shall be equal to the number of vacancies notified.

**ಕೃಷಿ ಅಧಿಕಾರಿ ಹುದ್ದೆಗೆ ಅಂಗವಿಕಲರಿಗೆ ಮೀಸಲಿರಿಸಿರುವ ಹುದ್ದೆಗಳ ಅಂಗವಿಕಲತೆಯ ವಿವರ: "ಚಲನವಲನ ವೈಕಲ್ಯ ಅಥವಾ ಸೆರೆಬ್ರಲ್ ಪಾಲ್ಸಿ" ಮಾತ್ರ**

ಮಹಿಳೆಯರಿಗೆ / ಮಾಜಿ ಸೈನಿಕರಿಗೆ / ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಸಂಕ್ಷೇಪ:** ಇ – ಇತರೆ / ಮ – ಮಹಿಳೆ / ಗ್ರಾ – ಗ್ರಾಮೀಣ / ಮಾ.ಸೈ – ಮಾಜಿ ಸೈನಿಕ / ಕ.ಮಾ.ಅ. – ಕನ್ನಡ ಮಾಧ್ಯಮ ಅಭ್ಯರ್ಥಿ / ಪ.ಜಾ – ಪರಿಶಿಷ್ಟ ಜಾತಿ / ಪ.ಪಂ. – ಪರಿಶಿಷ್ಟ ಪಂಗಡ / ಪ್ರ – ಪ್ರವರ್ಗ / ಸಾ.ಅ. – ಸಾಮಾನ್ಯ ಅರ್ಹತೆ / ಅಂ.ವಿ – ಅಂಗವಿಕಲ

| ಹುದ್ದೆಗಳ ಅನು ಕ್ರಮ ಸಂಖ್ಯೆ | ಹುದ್ದೆಯ ಸಂಕೇತ / POST CODE | ಹುದ್ದೆಯ ಪದನಾಮ ಮತ್ತು ಸಂಖ್ಯೆ | ವೇತನ ಶ್ರೇಣಿ | ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | ವಯೋಮಿತಿ (ವಯಸ್ಸು ವರ್ಷಗಳಲ್ಲಿ) | ಹುದ್ದೆಗಳ ವರ್ಗೀಕರಣ |
|---|---|---|---|---|---|---|
| 1 | 2 | 3 | 4 | 5 | 6 | 7 |
| 211–475 | 02 | ಸಹಾಯಕ ಕೃಷಿ ಅಧಿಕಾರಿ – 265 | ರೂ.10800–20025 | Must be a holder of B.Sc., (Agriculture) Degree awarded by a University established by Law in India | ಕನಿಷ್ಠ – 18<br>ಗರಿಷ್ಠ – 35<br><br>ಪ್ರ–2ಎ, ಪ್ರ–2ಬಿ, ಪ್ರ–3ಎ, ಪ್ರ–3ಬಿ } 38<br><br>ಪ.ಜಾ, ಪ.ಪಂ, ಪ್ರ–1 } 40 | (see table below) |

| ಮೀಸಲಾತಿ | ಇ | ಮ | ಗ್ರಾ | ಮಾ. ಸೈ | ಕ.ಮಾ.ಅ | ಅಂ.ವಿ | ಒಟ್ಟು |
|---|---|---|---|---|---|---|---|
| ಪ.ಜಾ | 11 | 12 | 10 | 04 | 02 | 01*** | 40 |
| ಪ.ಪಂ | 01 | 03 | 02 | 01 | 01 | 00 | 08 |
| ಪ್ರ–1 | 02 | 03 | 02 | 01 | 01 | 01* | 10 |
| ಪ್ರ–2ಎ | 11 | 12 | 10 | 04 | 02 | 01*** | 40 |
| ಪ್ರ–2ಬಿ | 02 | 03 | 03 | 01 | 01 | 01* | 11 |
| ಪ್ರ–3ಎ | 02 | 03 | 03 | 01 | 01 | 01* | 11 |
| ಪ್ರ–3ಬಿ | 03 | 04 | 03 | 01 | 01 | 01* | 13 |
| ಸಾ.ಅ | 36 | 39 | 34 | 13 | 07 | 03 1***/1** /1*) | 132 |
| ಒಟ್ಟು | 68 | 79 | 67 | 26 | 16 | 09 | 265 |

ಅಂಗವಿಕಲರಿಗೆ ಮೀಸಲಿರಿಸಿರುವ ಹುದ್ದೆಗಳ ಅಂಗವಿಕಲತೆಯ ವಿವರ: * ಅಂಧತ್ವ ಅಥವಾ ದೃಷ್ಟಿ ಮಾಂದ್ಯತೆ / ** ಚಲನವಲನ ವೈಕಲ್ಯ ಅಥವಾ ಸೆರೆಬ್ರಲ್ ಪಾಲ್ಸಿ / *** ಅಂಧತ್ವ ಅಥವಾ ದೃಷ್ಟಿ ಮಾಂದ್ಯತೆ, ಚಲನವಲನ ವೈಕಲ್ಯ ಅಥವಾ ಸೆರೆಬ್ರಲ್ ಪಾಲ್ಸಿ. ನಿಗದಿಪಡಿಸಿದ ಅಂಗವಿಕಲತೆವುಳ್ಳ ಅಭ್ಯರ್ಥಿಗಳು ದೊರಕದಿದ್ದಲ್ಲಿ ಹುದ್ದೆಗೆ ನಿಗದಿಪಡಿಸಿದ ಇತರೆ ಅಂಗವಿಕಲತೆವುಳ್ಳ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

ಮಹಿಳೆಯರಿಗೆ / ಮಾಜಿ ಸೈನಿಕರಿಗೆ / ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಸಂಕ್ಷೇಪ:** ಇ – ಇತರೆ / ಮ – ಮಹಿಳೆ / ಗ್ರಾ – ಗ್ರಾಮೀಣ / ಮಾ.ಸೈ – ಮಾಜಿ ಸೈನಿಕ / ಕ.ಮಾ.ಅ. – ಕನ್ನಡ ಮಾಧ್ಯಮ ಅಭ್ಯರ್ಥಿ / ಪ.ಜಾ – ಪರಿಶಿಷ್ಟ ಜಾತಿ / ಪ.ಪಂ. – ಪರಿಶಿಷ್ಟ ಪಂಗಡ / ಪ್ರ – ಪ್ರವರ್ಗ / ಸಾ.ಅ. – ಸಾಮಾನ್ಯ ಅರ್ಹತೆ / ಅಂ.ವಿ – ಅಂಗವಿಕಲ

| | | | | | | |
|---|---|---|---|---|---|---|
| 30–44 | 03 | ಸಹಾಯಕ ಕೃಷಿ ಅಧಿಕಾರಿ (ಕೃಷಿ ಇಂಜಿನಿಯರಿಂಗ್ ಮತ್ತು ನೀರು ನಿರ್ವಹಣೆ) – 15 | ರೂ.10800–20025 | Must be holder of a degree in B.Sc., (Agriculture Engineering) or B.Tech (Agriculture Engineering in post harvest and Engineering Technology) awarded by the University of Agricultural Sciences. | ಕನಿಷ್ಠ – 18<br>ಗರಿಷ್ಠ – 35<br>ಪ್ರ–2ಎ, ಪ್ರ–2ಬಿ, ಪ್ರ–3ಎ, ಪ್ರ–3ಬಿ – 38<br>ಪ.ಜಾ, ಪ.ಪಂ, ಪ್ರ–1 – 40 | (see table below) |

| ಮೀಸಲಾತಿ | ಇ | ಮ | ಗ್ರಾ | ಮಾ.ಸೈ | ಕ.ಮಾ.ಅ | ಅಂ.ವಿ | ಒಟ್ಟು |
|---|---|---|---|---|---|---|---|
| ಪ.ಜಾ | **01** | **00** | **01** | **00** | **00** | **00** | **02** |
| ಪ.ಪಂ | **00** | **01** | **00** | **00** | **00** | **00** | **01** |
| ಪ್ರ–1 | **00** | **01** | **00** | **00** | **00** | **00** | **01** |
| ಪ್ರ–2ಎ | **00** | **00** | **01** | **00** | **00** | **00** | **01** |
| ಪ್ರ–2ಬಿ | **00** | **01** | **00** | **00** | **00** | **00** | **01** |
| ಪ್ರ–3ಎ | **00** | **00** | **00** | **00** | **00** | **00** | **00** |
| ಪ್ರ–3ಬಿ | **00** | **01** | **00** | **00** | **00** | **00** | **01** |
| ಸಾ.ಅ | **03** | **03** | **01** | **01** | **00** | **00** | **08** |
| ಒಟ್ಟು | **04** | **07** | **03** | **01** | **00** | **00** | **15** |

ಮಹಿಳೆಯರಿಗೆ / ಮಾಜಿ ಸೈನಿಕರಿಗೆ / ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಸಂಕ್ಷೇಪ:** ಇ – ಇತರೆ / ಮ – ಮಹಿಳೆ / ಗ್ರಾ – ಗ್ರಾಮೀಣ / ಮಾ.ಸೈ – ಮಾಜಿ ಸೈನಿಕ / ಕ.ಮಾ.ಅ. – ಕನ್ನಡ ಮಾಧ್ಯಮ ಅಭ್ಯರ್ಥಿ / ಪ.ಜಾ – ಪರಿಶಿಷ್ಟ ಜಾತಿ / ಪ.ಪಂ. – ಪರಿಶಿಷ್ಟ ಪಂಗಡ / ಪ್ರ – ಪ್ರವರ್ಗ / ಸಾ.ಅ. – ಸಾಮಾನ್ಯ ಅರ್ಹತೆ / ಅಂ.ವಿ – ಅಂಗವಿಕಲ

ಸಹಿ/–

ಕೃಷಿ ಆಯುಕ್ತರು

**ಕರ್ನಾಟಕ ಸರ್ಕಾರ**

**ಕೃಷಿ ಇಲಾಖೆ**

**ಅಭ್ಯರ್ಥಿಗಳಿಗೆ ಸೂಚನೆಗಳು**

**1.** ಅಭ್ಯರ್ಥಿಗಳು ಇಲಾಖೆಯ ಅಧಿಕೃತ ವೆಬ್‌ಸೈಟ್ "http://raitamitra.kar.nic.in" ನಲ್ಲಿ ಟೆಂಡರ್/ಪ್ರಕಟಣೆಗಳು ಅಡಿಯಲ್ಲಿ ಕೃ.ಅ., ಸ.ಕೃ.ಅ. ನೇಮಕಾತಿಗೆ ಅರ್ಜಿ ಅಥವಾ Explorer Address (URL) ನಲ್ಲಿ "http://raitamitra.kar.nic.in/recruit.html"ನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ "ON-LINE APPLICATION FOR THE RECRUITMENT OF AGRICULTURAL OFFICER, ASSISTANT AGRICULTURAL OFFICER & ASSISTANT AGRICULTURAL OFFICER (AGRICULTURE ENGINEERING & WATER MANAGEMENT)" ಎಂದು ಮೂಡುವುದು. ಅದರ ಮೇಲೆ ಕ್ಲಿಕ್ ಮಾಡಿದ ಕೂಡಲೇ ಅಲ್ಲಿ ON-LINE APPLICATION ಪರದೆ ತೆರೆದುಕೊಳ್ಳುತ್ತದೆ. ಅದರಲ್ಲಿ ಬಿತ್ತರಿಸಲಾಗಿರುವ ಅರ್ಜಿ ನಮೂನೆಯಲ್ಲಿಯೇ ಅವರ ವಿವರಗಳನ್ನು ಭರ್ತಿ ಮಾಡಬೇಕು. ಈ ಅರ್ಜಿ ನಮೂನೆಯನ್ನು ಭರ್ತಿ ಮಾಡುವ ಮುನ್ನ "**Notification**", "**Instructions**" ಮತ್ತು ಭಾವಚಿತ್ರ ಹಾಗೂ ಅಗತ್ಯ ದಾಖಲಾತಿಗಳನ್ನು ಸ್ಕ್ಯಾನ್ (Scan) ಮಾಡುವ ಬಗ್ಗೆ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಂಡು ಜಾಗರೂಕತೆಯಿಂದ ಅರ್ಜಿಯನ್ನು ಭರ್ತಿ ಮಾಡಬೇಕು.

ಅಭ್ಯರ್ಥಿಗಳು "ON LINE " ಮೂಲಕ ಅರ್ಜಿಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಭರ್ತಿ ಮಾಡತಕ್ಕದ್ದು. ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಭರ್ತಿ ಮಾಡತಕ್ಕದ್ದು.

**2.** ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

| | |
|---|---|
| **GM - General Merit** | **SC - Scheduled Caste** |
| **C-I - Category I** | **ST – Scheduled Tribe** |
| **2A – Category 2A** | **Ex-MP - Ex-Military Person** |
| **2B – Category 2B** | **Rural – Rural Reservation** |
| **3A – Category 3A** | **KMS – Kannada Medium Student** |
| **3B – Category 3B** | **PH – Physically Handicapped** |

**3.** ಪ್ರಕಟಿಸಿರುವ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ ಇತ್ಯಾದಿ ವಿವರಗಳು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಮೊದಲು ಹೊಂದಿರಬೇಕು.

**ಟಿಪ್ಪಣಿ:** ಪ್ರಕಟಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

**ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿಯನ್ನು ಭರ್ತಿ ಮಾಡಿ ಶುಲ್ಕವನ್ನು ಪಾವತಿಸತಕ್ಕದ್ದು.**

**4. ನಿಗದಿತ ಶುಲ್ಕ:**

ಅ) ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳು ರೂ.500/– ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು ರೂ.200/–ಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.

ಆ) ಅಭ್ಯರ್ಥಿಗಳು ನಿಗದಿತ ಶುಲ್ಕವನ್ನು ಕರ್ನಾಟಕದ ಯಾವುದೇ ರಾಷ್ಟ್ರೀಯ ಬ್ಯಾಂಕಿನಿಂದ **"ಕೃಷಿ ನಿರ್ದೇಶಕರು, ಬೆಂಗಳೂರು–1",** ಇವರ ಹೆಸರಿಗೆ ಬೆಂಗಳೂರಿನಲ್ಲಿ ಪಾವತಿಯಾಗುವಂತೆ **"ಡಿಮ್ಯಾಂಡ್ ಡ್ರಾಫ್ಟ್"** ರೂಪದಲ್ಲಿ ಪಡೆಯಬೇಕು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇಲಾಖೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಇದನ್ನು ಹೊರತುಪಡಿಸಿ ಇತರೆ ಯಾವುದೇ ರೂಪದಲ್ಲಿ ಶುಲ್ಕವನ್ನು ಸ್ವೀಕರಿಸಲಾಗುವುದಿಲ್ಲ.

ಇ) ಅಭ್ಯರ್ಥಿಗಳು **"ಡಿಮ್ಯಾಂಡ್ ಡ್ರಾಫ್ಟ್"ನ** ಹಿಂಭಾಗದಲ್ಲಿ ಅವರ ಹೆಸರು, ಅರ್ಜಿ ಸಂಖ್ಯೆ, ಅರ್ಜಿಯನ್ನು ಸಲ್ಲಿಸಿರುವ ಹುದ್ದೆಯ ಹೆಸರು ಮತ್ತು ವಿಳಾಸವನ್ನು ತಪ್ಪದೇ ನಮೂದಿಸಬೇಕು. ಹಾಗೂ **"ಡಿಮ್ಯಾಂಡ್ ಡ್ರಾಫ್ಟ್"ನ** ಸಂಖ್ಯೆ, ದಿನಾಂಕ ಮತ್ತು ಬ್ಯಾಂಕಿನ ಹೆಸರನ್ನು ಅಭ್ಯರ್ಥಿಗಳು ಅಂತರ್ಜಾಲದ ಮೂಲಕ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ನಿರ್ದಿಷ್ಟ ಪಡಿಸಿದ ಜಾಗದಲ್ಲಿ ನಮೂದಿಸತಕ್ಕದ್ದು. ಹಾಗೂ **"ಡಿಮ್ಯಾಂಡ್ ಡ್ರಾಫ್ಟ್"ನ** ಒಂದು ಜೆರಾಕ್ಸ್ ಪ್ರತಿಯನ್ನು ತೆಗೆದುಕೊಂಡು ಅಭ್ಯರ್ಥಿಯು ಅವರ ಮಾಹಿತಿಗೆ ಇಟ್ಟುಕೊಂಡು, ಅದನ್ನು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಈ) ಅಂತರ್ಜಾಲದ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ಅಭ್ಯರ್ಥಿಗಳು ಅರ್ಜಿಯ ಎರಡು ಪ್ರತಿಗಳನ್ನು ಪ್ರಿಂಟ್ ಪಡೆದುಕೊಂಡು ಒಂದು ಪ್ರತಿಯನ್ನು ಅವರ ಮಾಹಿತಿಗೆ ಇಟ್ಟುಕೊಂಡು ಅದನ್ನು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಉ) **ಅರ್ಜಿಯ ಮತ್ತೊಂದು ಪ್ರತಿಯನ್ನು "ಡಿಮ್ಯಾಂಡ್ ಡ್ರಾಫ್ಟ್"ನ ಮೂಲ ಪ್ರತಿಯೊಂದಿಗೆ (Original Demand Draft) ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಶೈಕ್ಷಣಿಕ ವಿದ್ಯಾರ್ಹತೆ ಪ್ರಮಾಣ ಪತ್ರಗಳು, ಕೋರಿರುವ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳು, ಹಾಲಿ ಸೇವೆಯಲ್ಲಿದ್ದರೆ ಉದ್ಯೋಗದಾತರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ, ಮತ್ತು ಇತರೆ ಮುಂತಾದ ಅಗತ್ಯ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕೃತಗೊಂಡ ಜೆರಾಕ್ಸ್ ಪ್ರತಿಯೊಂದಿಗೆ " 14" X10" " ಅಳತೆಯ ಲಕೋಟೆಯಲ್ಲಿ, ಲಕೋಟೆಯ ಮೇಲೆ ಅಭ್ಯರ್ಥಿಯ ಹೆಸರು, ಅರ್ಜಿಯ ಸಂಖ್ಯೆಯನ್ನು ಮತ್ತು "Application for the post of Agricultural Officer / Assistant Agricultural Officer / Assistant Agricultural Officer (Agriculture Engineering & Water Management)" (ಅನ್ವಯಿಸುವ ಹುದ್ದೆಯ ಹೆಸರನ್ನು ಮಾತ್ರ ನಮೂದಿಸತಕ್ಕದ್ದು) ತಪ್ಪದೇ ಬರೆದು "ಕೃಷಿ ಆಯುಕ್ತರು, ಶೇಷಾದ್ರಿ ರಸ್ತೆ, ಬೆಂಗಳೂರು–560001," ಈ ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆ ಮೂಲಕ ದಿನಾಂಕ:11.11.2011 ರೊಳಗೆ ತಲುಪುವಂತೆ ಸಲ್ಲಿಸತಕ್ಕದ್ದು.**

**5. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:**

**5.1 ಶೈಕ್ಷಣಿಕ ವಿದ್ಯಾರ್ಹತೆ:** ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಅಧಿಸೂಚಿಸಿದ ಆಯಾ ಹುದ್ದೆಯ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರು ಸಹ ಪರಿಗಣಿಸಲಾಗುವುದಿಲ್ಲ.

**5.2 ವಯೋಮಿತಿ:** ಇಲಾಖೆಯ ಅಧಿಸೂಚನೆಯ ಅನುಸೂಚಿಯಲ್ಲಿ ಆಯಾ ಹುದ್ದೆಯ ಮುಂದೆ ಸೂಚಿಸಿದಂತೆ ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರನ್ವಯ ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

**(ಅ)** ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

**(ಆ)** ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**ವಿವರಣೆ:–**

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು.

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:–

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ:–** ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ.

**(ಇ)** ಅಭ್ಯರ್ಥಿಗಳು ನ್ಯಾಷನಲ್ ಕ್ಯಾಡೆಟ್ ಕೋರ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂಥ ಕ್ಯಾಡೆಟ್ ಪರಿವೀಕ್ಷಕನಾಗಿ ಅವನು ಸೇವೆ ಸಲ್ಲಿಸಿದಷ್ಟು ವರ್ಷಗಳು.

**(ಈ)** ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಿಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅವನು / ಅವಳು ಅಂತಹ ಗ್ರಾಮ ಪರಿಶೀಲಿಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

**(ಉ)** ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

**(ಊ)** ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

**(ಋ)** ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

**(ೠ)** ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 5.2(ೠ)ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡಿರಬೇಕು.

**6. ನೇಮಕಾತಿ ವಿಧಾನ:–**

ಕರ್ನಾಟಕ ಕೃಷಿ ಸೇವೆಗಳು (ನೇಮಕಾತಿ) ನಿಯಮಗಳು 1999ರನ್ವಯ ಅಭ್ಯರ್ಥಿಗಳು ಈ ಅಧಿಸೂಚನೆಯ ಪ್ಯಾರಾ–6ರಲ್ಲಿ ತಿಳಿಸಿರುವಂತೆ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಪಡೆದ ಒಟ್ಟು ಶೇಕಡವಾರು ಅಂಕಗಳ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳ ಮೀಸಲಾತಿಗೆ (ಮೀಸಲಾತಿ ವರ್ಗೀಕರಣಗಳಂತೆ) ಸಂಬಂಧಿಸಿದಂತೆ ಸಿಂಧುತ್ವ ಪ್ರಮಾಣ ಪತ್ರವನ್ನು ಹಾಗೂ ಪೋಲೀಸ್ ವರದಿ, ದೇಹದಾರ್ಢ್ಯ ವೈದ್ಯಕೀಯ ಪ್ರಮಾಣಪತ್ರ ಇವುಗಳನ್ನು ಸಂಬಂಧಿಸಿದ ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು ಆಯ್ಕೆ ಬಗ್ಗೆ ಸಮರ್ಥನೆಯಾದ ಪ್ರಕರಣಗಳಿಗೆ ಮಾತ್ರ ನೇಮಕಾತಿ ಆದೇಶ ನೀಡಲಾಗುವುದು.

**7. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:–**

ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ "ಡಿ" ರಲ್ಲಿ

ಆ) ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ "ಇ" ರಲ್ಲಿ

ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ "ಎಫ್" ರಲ್ಲಿ

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರಬೇಕು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹರಾದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ.) ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. ಮೀಸಲಾತಿ ಪ್ರಮಾಣಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು.) (ಹಾಗೂ ಅದೇ ಪ್ರಮಾಣ ಪತ್ರವನ್ನು ಮೂಲ ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.)

**8. ಗ್ರಾಮೀಣ ಅಭ್ಯರ್ಥಿ:–**

ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/08/ಸೆನೆನಿ/2001 ದಿ:13.02.2001ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿ (Block Education Officer) ರವರಿಂದ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ) (ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ) (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ.)

**9. ಕನ್ನಡ ಮಾಧ್ಯಮ ಅಭ್ಯರ್ಥಿ:–**

ಸರ್ಕಾರಿ ಅಧಿಸೂಚನೆ ಸಂಖ್ಯೆ:ಸಿಆಸುಇ/71/ಸೆನೆನಿ/2001 ದಿ:24.10.2002ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ.)

**10. ಅಂಗವಿಕಲ ಅಭ್ಯರ್ಥಿ:–**

ಸಮೂಹ "ಬಿ" ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/50/ಎಸ್‌ಆರ್‌ಆರ್/2000 ದಿ:03.09.2005ರನ್ವಯ ಮತ್ತು ಸರ್ಕಾದ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/52/ಸೆನೆನಿ/2009 ದಿ:28.09.2010ರಲ್ಲಿ ಗುರ್ತಿಸಿರುವಂತೆ) ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ/115/ಸೆನೆನಿ/2005 ದಿ:19.11.2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಇಲಾಖೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ. (ಈ ಪ್ರಮಾಣ ಪತ್ರದ ನಮೂನೆಯನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ.)

**11. ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ:**

ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/23/ಎಸ್‌ಆರ್‌ಆರ್/99 ದಿನಾಂಕ:23.11.2000ರ ಪ್ರಕಾರ ಯೋಜನೆಗಳಿಂದ ಸಂತ್ರಸ್ತರಾದ ಅಭ್ಯರ್ಥಿಗಳಿಗೆ ಮೀಸಲಾತಿ ಸೌಲಭ್ಯ ಇರುವುದಿಲ್ಲ.

**12. ಇಲಾಖೆಯೊಡನೆ ಪತ್ರ ವ್ಯವಹಾರ:–**

ಇಲಾಖೆಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳಿಗೆ ಕರೆ ಪತ್ರ ಬಾರದಿದ್ದಲ್ಲಿ, ಕೃಷಿ ಆಯುಕ್ತರು, ಬೆಂಗಳೂರು ರವರ ಕಛೇರಿಯನ್ನು ಖುದ್ದಾಗಿ ಸಂಪರ್ಕಿಸತಕ್ಕದ್ದು.

ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಕೃಷಿ ಆಯುಕ್ತರು, ಬೆಂಗಳೂರು, ರವರ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಇಲಾಖೆಯು ಪ್ರಯತ್ನಿಸುವುದು. ಆದಾಗ್ಯೂ ಇಲಾಖೆಯು ಈ ವಿಚಾರದಲ್ಲಿ ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಇಲಾಖೆಯೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು:–

1) ಹುದ್ದೆಯ ಹೆಸರು
2) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)
3) ಅರ್ಜಿ ಸಂಖ್ಯೆ
4) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

**13. <u>ಪ್ರಾಮುಖ್ಯವಾದ ಸೂಚನೆಗಳು:</u>**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್ / ಮಾರ್ಕರ್ ಪೆನ್‌ರಲ್ಲಿ ಸಹಿಯನ್ನು ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. **ಕೋರಿರುವ ಮೀಸಲಾತಿ ಪ್ರಮಾಣಪತ್ರಗಳು ಮತ್ತು ಇತರೆ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ONLINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಕೋರಿರುವ ಮೀಸಲಾತಿ ಪ್ರಮಾಣಪತ್ರಗಳು ಮತ್ತು ಇತರೆ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗುವ ಸಮಯದಲ್ಲಿ ಹಾಜರುಪಡಿಸಬೇಕು. ತಪ್ಪಿದಲ್ಲಿ ಇವರ ಮೀಸಲಾತಿಯನ್ನು/ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

1. ಹುದ್ದೆಗೆ ನಿಗದಿಪಡಿಸಿದ ಶುಲ್ಕ ಪಾವತಿ ಡಿಮ್ಯಾಂಡ್ ಡ್ರಾಫ್ಟ್ ಮೂಲ ಪ್ರತಿ.
2. ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳು.
3. ಅಂಕಪಟ್ಟಿಯಲ್ಲಿ ಶೇಕಡಾವಾರು ಅಂಕವನ್ನು ನಮೂದಿಸದೇ ಇದ್ದಲ್ಲಿ ಗ್ರೇಡನ್ನು ಶೇಕಡಾವಾರು ಅಂಕಗಳಿಗೆ ಪರಿವರ್ತಿಸಿದ ಪ್ರಮಾಣಪತ್ರ.
4. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ / ವರ್ಗಾವಣೆ ಪ್ರಮಾಣಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
5. ಕೃಷಿ ವಿಶ್ವವಿದ್ಯಾನಿಲಯ ಅಥವಾ ಕೃಷಿ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದರೆ, ಸೇವಾ ಪ್ರಮಾಣ ಪತ್ರ. (ಸೇವಾ ಅನುಭವದ ಮೇಲೆ ಕೃಪಾಂಕ ಕೋರಿದ್ದಲ್ಲಿ) **<u>(ಕೃಷಿ ಅಧಿಕಾರಿ ಹುದ್ದೆಗೆ ಮಾತ್ರ ಅನ್ವಯಿಸುತ್ತದೆ) (ತಾತ್ಕಾಲಿಕ ಸೇವೆ ಅಥವಾ ಗುತ್ತಿಗೆ ಆಧಾರದ ಸೇವೆಯನ್ನು ಪರಿಗಣಿಸಲಾಗುವುದಿಲ್ಲ)</u>**
6. ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ. (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
7. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗೆ ಆ ಬಗ್ಗೆ ಸಂಬಂಧಪಟ್ಟ ಇಲಾಖೆಯವರು ನೀಡಿರುವ ವೈದ್ಯಕೀಯ ಮಂಡಳಿ ವರದಿ ಮತ್ತು ಅಭ್ಯರ್ಥಿಯು ಆ ವ್ಯಕ್ತಿಯ ಕುಟುಂಬದವರಾಗಿ ಮಾಜಿ ಸೈನಿಕ ಮೀಸಲಾತಿಯಡಿ ಉದ್ಯೋಗಕ್ಕೆ ಅರ್ಹರಿರುವ ಬಗ್ಗೆ ಸಂಬಂಧಪಟ್ಟ ಜಿಲ್ಲೆಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಪಡೆದಿರುವ ಪ್ರಮಾಣಪತ್ರ. (ಮಾಜಿ ಸೈನಿಕ ಕೋಟಾದಡಿಯಲ್ಲಿ ಮಾಜಿ ಸೈನಿಕರ ಕುಟುಂಬದವರಾಗಿ ಮೀಸಲಾತಿ ಕೋರುವವರು)
8. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ. (ಮೀಸಲಾತಿ ಕೋರಿದ್ದಲ್ಲಿ.)
9. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
10. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣಪತ್ರ. (ಮೀಸಲಾತಿ ಕೋರಿದ್ದಲ್ಲಿ)
11. ಅಂಗವಿಕಲ ಮೀಸಲಾತಿ ಪ್ರಮಾಣಪತ್ರ. (ಮೀಸಲಾತಿ ಕೋರಿದ್ದಲ್ಲಿ)
12. ವಯೋಮಿತಿ ಸಡಿಲಿಕೆಗೆ ಸಂಬಂಧಿಸಿದ ದಾಖಲಾತಿ. (ಸಡಿಲಿಕೆ ಕ್ಲೇಮ್ ಮಾಡಿದ್ದಲ್ಲಿ)

(ಮೇಲಿನ ಕ್ರಮ ಸಂಖ್ಯೆ: 8, 9, 10 ಮತ್ತು 11ರ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ. ನಿಗದಿಪಡಿಸಿದ ನಮೂನೆಗಳಲ್ಲಿ ಮೀಸಲಾತಿಯನ್ನು ಕೋರದೇ ಇತರೆ ನಮೂನೆಗಳಲ್ಲಿ ಕೋರಿದ್ದಲ್ಲಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು.)

**14. ವಿಶೇಷ ಸೂಚನೆಗಳು:**

1. ONLINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಎರಡು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಪ್ರತಿಯನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.
2. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.
3. ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

15. **ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಮೂಲ ದಾಖಲಾತಿಗಳ ಪರಿಶೀಲನೆ ಹಾಗೂ ಇತ್ಯಾದಿ ಸಂದರ್ಭದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು / ಅವಳು ಸ್ವಂತ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/–

ಕೃಷಿ ಆಯುಕ್ತರು

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ:19–11–2005**

# CERTIFICATE FOR THE PERSONS WITH DISABILITIES

This is to certify that Sri/ Smt / Kum______________________________________________ Son / Wife / Daughter of Shri ________________________________________________ Age _____old, male / female, Registration No______________________________________ is a case of ____________________________________________________________________ He / She is physically disabled / visual disabled / speech & hearing disabled and has ___________%(____________ percent) permanent (physical impairment / visual impairment / speech & hearing impairment) in relation to his / her _____________________________

**Note:**

1. This condition is progresstive / non-progressive likely to improve / not likely to improve.*
2. Re-assessment is not recommended / is recommended after a periof of ________________ months / years.*

* Strike out which is not applicable

(Recent Attested Photograph showing the disability affixed here)

| | | | |
|---|---|---|---|
| | Sd/-<br>(DOCTOR)<br>(Seal) | Sd/-<br>(DOCTOR)<br>(Seal) | Sd/-<br>(DOCTOR)<br>(Seal) |

Countersigned by the
Medical Superintendent CMO Head of
Hospital (with seal)

Signature/Thumb impression
of the disabled person.

Explanation:- As per Notification No.DPAR 50 SRR 2000 dated 03-09-2005 "Physically handicapped candidates" or "person with disability" means a person suffering from not less than forty percent of any of the following disabilities :- (1) Blindness (2) Low Vision (3) Hearing impairment (4) Locomotor disability (5) Leprosy cured (6) Mental retardation (7) Mental illness.

(1) Blindness refers to a condition where a person suffers from any of the following conditions, namely:- (a) Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse; (2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device; (3) "Hearing impairment" means loss of sixty decibels or more in the better ear in the conversational range of frequencies. (4) "Locomotor disability" means disability of the bones, joints or muscles leading to substantial restriction of the movement of the limbs or any form of cerebral palsy. (5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & paresis in the eye & eyelid, but with no manifest deformity; (ii) manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion "Leprosy cured" shall be construed accordingly; (6) Mental Retardation:- means a condition of arrested or incomplete develop ment of mind of a person who is specially characterized by sub normality of intelligence; (7) Mental Illness:- means any mental disorder other than mental retardation.

**(ಪ.ಜಾ./ ಪ.ಪಂ.ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ–ಡಿ**

**(ನಿಯಮ 3ಎ (2) (3) ನ್ನು ನೋಡಿ)**

**ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.**
**ಪ್ರಮಾಣ ಪತ್ರ**

------------------------ರಾಜ್ಯದ / ಕೇಂದ್ರಾಡಳಿತ ಪ್ರದೇಶದ *--------------------ಜಿಲ್ಲೆಯ / ವಿಭಾಗದ --------------ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ --------------ಎಂಬುವವರ ಮಗ/ಮಗಳಾದ ಶ್ರೀ / ಶ್ರೀಮತಿ ------------ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು)(ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951
  (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ, ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970, ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ)
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು) ಅನುಸೂಚಿತ ಬುಡಕಟ್ಟುಗಳ ಆದೇಶ, 1959
- ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
- ಸಂವಿಧಾನ (ಪಾಂಡಿಚೆರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ, 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ * -------------ಮತ್ತು / ಅಥವಾ ಅವನ*/ಅವಳ* ಕುಟುಂಬವು ----------ರಾಜ್ಯ/ ಕೇಂದ್ರಾಡಳಿತ ಪ್ರದೇಶದ ----------------ಜಿಲ್ಲಾ / ವಿಭಾಗದ * ------------------ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು).

ಸಹಿ:-------------
ತಹಸೀಲ್ದಾರ್ -------------

ಸ್ಥಳ:
ದಿನಾಂಕ:

ಪದನಾಮ
ಕಛೇರಿಯ ಮೊಹರಿನೊಂದಿಗೆ
ರಾಜ್ಯ / ಕೇಂದ್ರಾಡಳಿತ ಪ್ರದೇಶ*

*ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ / ಹೊಡೆದು ಹಾಕಿ.
ಸೂಚನೆ:– ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950 ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೆ ಹೊಂದಿರುತ್ತದೆ.
ಭಾರತ ಸರ್ಕಾರದ ಪತ್ರ ಸಂಖ್ಯೆ:ಬಿಸಿ 12028/2/78 ಎಸ್‌ಸಿಟಿ – 1 ಗೃಹಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975 ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮತ್ರ)**

**ನಮೂನೆ – ಇ**

**(ನಿಯಮ 3ಎ (2) (3) ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

_______________________ಗ್ರಾಮ / ಪಟ್ಟಣ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ____________ಇವರ ಮಗ / ಮಗಳು/ ಪತಿ/ ಪತ್ನಿಯಾದ ಶ್ರೀ / ಶ್ರೀಮತಿ ___________________ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ___________________ ಜಾತಿಯ _______________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ:

ತಹಸೀಲ್ದಾರರು
_ _ _ _ _ __ _ ತಾಲ್ಲೂಕು
ಕಛೇರಿಯ ಮೊಹರು.

---

**(ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ –ಎಫ್**

**(ನಿಯಮ 3ಎ (2) (3)ನ್ನು ನೋಡಿ)**

**ಪ್ರವರ್ಗ–1ರ ಹೊರತಾಗಿ, ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

_______________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ________________________ ಇವರ ಮಗ/ಮಗಳು/ಪತಿ/ಪತ್ನಿಯಾದ, ಶ್ರೀ / ಶ್ರೀಮತಿ / ಕುಮಾರಿ ________________ ಇವರು ಮತ್ತು ಆತನ / ಅವಳ ತಂದೆ ತಾಯಿ/ಪೋಷಕರು/ಪತ್ನಿ/ ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ:30–03–2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು :

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ ಗ್ರೂಪ್–ಎ ಅಥವಾ ಗ್ರೂಪ್–ಬಿ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ಕೈಗಾರಿಕೆ /ಸಂಸ್ಥೆಯಲ್ಲಿ ಗ್ರೂಪ್–ಬಿ ಅಧಿಕಾರಿಯ ವೇತನ ಶ್ರೇಣಿ ರೂ.6000–11200/–ಗೆ ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು ;

ಅಥವಾ

ಆತನ /ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ವಾರ್ಷಿಕ ನಿವ್ವಳ ಆದಾಯವೂ ಎರಡು ಲಕ್ಷ ಮೀರಿರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ ಪೋಷಕ/ಪತ್ನಿ / ಪತಿಯ ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲೂಡಿ 225 ಬಿಸಿಎ 2000 ದಿನಾಂಕ: 30–03–2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ _________ಇವರು _________ಜಾತಿಗೆ________ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲೂಡಿ 225 ಬಿಸಿಎ 2000 ದಿ:30–03–2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ__________ (2ಎ, 2ಬಿ,3ಎ,3ಬಿ) ಸೇರಿರುತ್ತಾರೆ.

ಸ್ಥಳ:
ದಿನಾಂಕ:

ತಹಸೀಲ್ದಾರರು
_ _ _ _ _ __ _ ತಾಲ್ಲೂಕು
ಕಛೇರಿಯ ಮೊಹರು.

## ನಮೂನೆ–1

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ.**

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

ತಹಸೀಲ್ದಾರರು
_________ತಾಲ್ಲೂಕು
_________ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ____________ಎಂಬುವವರ ಮಗ/ಮಗಳು/ಪತಿ/ಪತ್ನಿ ____________ ಆದ ನಾನು ಮೇಲುಸ್ತರದಲ್ಲಿ (creamy layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
1. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ / ಖಾಸಗಿ)
2. ಅಭ್ಯರ್ಥಿಯ ಪ್ರಸ್ತುತ ವಿಳಾಸ
   (ಸ್ಪಷ್ಟವಾಗಿ ನಮೂದಿಸುವುದು)
3. ಅಭ್ಯರ್ಥಿಯ ಖಾಯಂ ವಿಳಾಸ:
4. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
5. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

i) ವೇತನ ಶ್ರೇಣಿ
ii) ಜಮೀನಿನ ವಿವರ
iii) ಇತರ ಮೂಲಗಳು

6. ಆದಾಯ ತೆರಿಗೆ ಪಾವತಿದಾರರೇ?
7. ಸಂಪತ್ತು ತೆರಿಗೆ ಪಾವತಿದಾರರೇ?
8. ಮಾರಾಟ ತೆರಿಗೆ ಪಾವತಿದಾರರೇ?

### ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ:
ದಿನಾಂಕ:

ತಮ್ಮ ವಿಧೇಯ,

(ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ

ತಂದೆ/ತಾಯಿ/ಪೋಷಕರ ಸಹಿ.
(ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರ ಸಾಕ್ಷಿದಾರರು :**

ಅಭ್ಯರ್ಥಿಯು ಮತ್ತು ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ: 1)

2)

(ಪೂರ್ಣ ವಿಳಾಸದೊಂದಿಗೆ)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ / ಶ್ರೀಮತಿ ______________________ ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ ಶ್ರೀಮತಿ / ಕುಮಾರಿ ____________ಎಂಬುವವರು ಕರ್ನಾಟಕ ರಾಜ್ಯದ __________ ಜಿಲ್ಲೆಯ ವಿಭಾಗ _________________ ಗ್ರಾಮ / ಪಟ್ಟಣ / ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆಂದು ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

ಶ್ರೀ / ಶ್ರೀಮತಿ / ಕುಮಾರಿ ____________ ಇವರ ತಂದೆ/ ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31-01-1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (creamy layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ:

ತಹಸೀಲ್ದಾರರು
_ _ _ _ __ _ ತಾಲ್ಲೂಕು
ಕಛೇರಿಯ ಮೊಹರು.

---

ಸೂಚನೆ-1: ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950 ರ ಜನತಾ ಪ್ರಾತಿನಿದ್ಯ ಕಾಯಿದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.
ಸೂಚನೆ-2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಅದೇಶ ಸಂಖ್ಯೆ: ಎಸ್‌ಡಬ್ಲೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31-01-1995 ರನ್ವಯ ಮೇಲುಸ್ತರ (creamy layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡು ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 96 ಸೇನನಿ 2005, ದಿನಾಂಕ 10–08–2005

ನಮೂನೆ – 2

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ____________________________ ರವರ ಮಗ/ಮಗಳು/ಪತಿ/ಪತ್ನಿ ಶ್ರೀ / ಶ್ರೀಮತಿ / ಕುಮಾರಿ _________________ಜಿಲ್ಲೆ_________________ತಾಲ್ಲೂಕು__________________ಗ್ರಾಮದಲ್ಲಿ _____________ ವಾಸವಾಗಿರುವ ಇವರು ಒಂದನೇ ತರಗತಿಯಿಂದ _____________ ತರಗತಿಯವರೆಗೆ __________________ ಜಿಲ್ಲೆ _____________ತಾಲ್ಲೂಕು ________________ ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ__________________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

(ಸಹಿ)
ಮುಖ್ಯೋಪಾಧ್ಯಾಯರು.

ಮೇಲುರುಜು

ಕ್ಷೇತ್ರ ಶಿಕ್ಷಣ ಅಧಿಕಾರಿ

---

**ಕನ್ನಡ ಮಾಧ್ಯಮ ವಾಸಂಗ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ___________________________ ರವರ ಮಗ / ಮಗಳು/ಪತ್ನಿ ಶ್ರೀ / ಶ್ರೀಮತಿ ಕುಮಾರಿ _______________ ಜಿಲ್ಲೆ ____________________ ತಾಲ್ಲೂಕು ____________________ ಗ್ರಾಮದಲ್ಲಿ ____________ ವಾಸವಾಗಿರುವ ಇವರು _________ ತರಗತಿಯಿಂದ ____________ತರಗತಿಯವರೆಗೆ ____________ ಶೈಕ್ಷಣಿಕ ವರ್ಷದಿಂದ _______________ ಶೈಕ್ಷಣಿಕ ವರ್ಷದವರೆಗೆ ________________ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ದಿನಾಂಕ: ___________ ಮುಖ್ಯೋಪಾಧ್ಯಾಯರ ಸಹಿ ಮತು ಸಂಸ್ಥೆಯ ಮೊಹರು.

ಸ್ಥಳ : ___________

ಸೂಚನೆ:– ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಶಾಲಾವಾರು ಪ್ರತ್ಯೇಕ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಸಲ್ಲಿಸಬೇಕು.

---

## ರಾಜ್ಯ ಸರ್ಕಾರಿ/ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ..................................................ರವರು ರಾಜ್ಯ/ಕೇಂದ್ರ .......................................................ಸರ್ಕಾರದಲ್ಲಿ (ಪದನಾಮ)..........................................................................................ಇಲಾಖೆಯಲ್ಲಿ ಖಾಯಂ/ತಾತ್ಕಾಲಿಕ ಹುದ್ದೆಯನ್ನು ದಿನಾಂಕ ................................................ ರಿಂದ ..................................................ರವರೆಗೆ ಹೊಂದಿರುವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿಯವರಿಗೆ ಕೃಷ ಅಧಿಕಾರಿ / ಸಹಾಯಕ ಕೃಷಿ ಅಧಿಕಾರಿ / ಸಹಾಯಕ ಕೃಷಿ ಅಧಿಕಾರಿ (ಕೃಷಿ ಇಂಜಿನಿಯರಿಂಗ್ ಮತ್ತು ನೀರು ನಿರ್ವಹಣೆ) ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ: ನೇಮಕಾತಿ ಪ್ರಾಧಿಕಾರದ ಸಹಿ/

ದಿನಾಂಕ: ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ

## CERTIFICATE TO BE FURNISHED BY THE STATE/CENTRAL GOVT. SERVANTS

Certified that Sri / Smt .................................................. holds a permanent / temporary post under the State/Central Govt. as ........................................(Designation) in the Dept. of .................................from.....................................having been appointed there-in under the rules of recruitment. He / She is permitted to apply for the post of Agricultural Officer / Asst. Agril. Officer / Asst. Agril. Officer (Agril. Engineering & Water Management).

Place : Signature of the appointing authority

Date : of the department / with name and se